ಆಶ್ರಯ ಯೋಜನೆಯ ಫಲಾನುಭವಿಗಳ ಸಂಖ್ಯೆ

1156 (69): ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ):-

ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಆಶ್ರಯ ಯೋಜನೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಗುರುತಿಸಲಾಗಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಆ) ಈ ಯೋಜನೆಯಲ್ಲಿ ನಿವೇಶನವನ್ನು ಹಂಚಲು ಸರ್ಕಾರಿ ಜಮೀನು ಅಲ್ಲದೆ ಖಾಸಗಿ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ (ತಾಲ್ಲೂಕುವಾರು ವಿವರ ನೀಡುವುದು);

ಇ) ಸ್ವಾಧೀನಪಡಿಸಿಕೊಂಡಿರುವ ಜಮೀನಿನ ಮಾಲೀಕರಿಗೆ ಪರಿಹಾರ ನೀಡಲಾಗಿದೆಯೇ ? (ತಾಲ್ಲೂಕುವಾರು ವಿವರ ನೀಡುವುದು)

ಶ್ರೀ ಗೋಪಿನಾಥ ಆರ್. ಸಾಂಡ್ರಾ (ವಸತಿ ಸಚಿವರು):-

ಅ) ತಾಲ್ಲೂಕು ಹೆಸರು	ಫಲಾನುಭವಿಗಳ ಸಂಖ್ಯೆ
1. ಕುಂದಾಪುರ	2370
2. ಉಡುಪಿ	2687
3. ಕಾರ್ಕಳ	1877
4. ಪುತ್ತೂರು	3075
5. ಸುಳ್ಯಾ	2578
6. ಬೆಳ್ತಂಗಡಿ	3313
7. ಬಂಟವಾಳ	6681
8. ಮಂಗಳೂರು	4508
	27089

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ರಾಜ್ಯದ ಮಹಾನಗರ ಪಾಲಿಕೆಗಳ ಸಂಖ್ಯೆ

1157 (787): ಶ್ರೀ ಬಿ.ಎಂ. ಇದಿನಬ್ಬ (ಉಳ್ಳಾಲ):-

ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಮಹಾನಗರ ಪಾಲಿಕೆಗಳು ಎಲ್ಲೆಲ್ಲಿ ಎಷ್ಟು ಇವೆ;

ಆ) ಪ್ರತಿಯೊಂದು ನಗರಪಾಲಿಕೆಯಲ್ಲಿರುವ ಒಟ್ಟು ಸಿಬ್ಬಂದಿ ಸಂಖ್ಯೆ ಎಷ್ಟು; (ಪ್ರತ್ಯೇಕ ವಿವರ ನೀಡುವುದು)

ಇ) ಈ ಸಿಬ್ಬಂದಿ ಹುದ್ದೆಗಳ ಹೆಸರುಗಳನ್ನು ಪ್ರತ್ಯೇಕವಾಗಿ ಮಹಾನಗರ ಪಾಲಿಕೆವಾರು ಸಹ ತಿಳಿಸುವುದು;